**O.S. No.** 120/2023 **PW** 1

ದಿನಾಂಕಃ 19.01.2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ವಕೀಲರಿಂದ:

ಈ ದಿನ ನಾನು ನನ್ನ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳ ಬಗ್ಗೆ ಮಾಹಿತಿ ಇರುತ್ತದೆ. ಪ್ರಮಾಣ ಪತ್ರವನ್ನು ನಾನೇ ಹೇಳಿ ಬರೆಸಿದ್ದು ಅದನ್ನು ನಾನು ಓದಿ ತಿಳಿದುಕೊಂಡ ನಂತರ ಅದಕ್ಕೆ ಸಹಿ ಮಾಡಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳ ಬಗ್ಗೆ ಮಾಹಿತಿ ಇರುತ್ತದೆ. ನಾನು ಈ ಕೆಳಕಂಡ ದಾಖಲೆಗಳನ್ನು ಹಾಜರು ಮಾಡಿದ್ದೇನೆ.

ದಿಃ 22.08.2011 ರ ಕ್ರಯ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ 01 ಎಂದು ಗುರುತಿಸಲಾಯಿತು. ಸರ್ವೆ ನಂ 49/10 ರ ಹದ್ದು ಬಸ್ತು ನಕ್ಷೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 02 ಎಂದು ಗುರುತಿಸಲಾಯಿತು. ಸರ್ವೆ ನೋಟಿಸ್ ನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ 03 ಎಂದು ಗುರುತಿಸಲಾಯಿತು. ಮಹಜರ್ ನ್ನು ನಿಪಿ 4 ಎಂದು, ಸರ್ವೆ ನಂ 49/10 ರ ಆರ್ ಟಿ ಸಿಯನು ಹಾಜರುಪಡಿಸಿದ್ದು ಅದನ್ನು ನಿಪಿ 05 ಎಂದು ಗುರುತಿಸಲಾಯಿತು. ದಿಃ 04.01.1957 ರ ಕ್ರಯ ಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 06 ಎಂದು ಗುರುತಿಸಲಾಯಿತು. ನೋಟಿಸ್ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 07 ಎಂದು ಗುರುತಿಸಲಾಯಿತು. ಅಂಚೆ ರಶೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 08 ಎಂದು ಗುರುತಿಸಲಾಯಿತು. ಅಂಚೆ ಸ್ವೀಕೃತಿಯನ್ನು ನಿಪಿ ಹಾಜರುಪಡಿಸಿದ್ದು ಅದನ್ನು ನಿಪಿ 09 ಎಂದು ಗುರುತಿಸಲಾಯಿತು.

ಮುಂದುವರಿದ ಮುಖ್ಯ ವಿಚಾರಣೆಗೆ ವಾದಿ ಪರ ವಕೀಲರು ಕಾಲಾವಕಾಶ ಕೋರಿದ್ದು, ನೀಡಲಾಯಿತು.

ತೆ ನ್ಯಾ ಬೆ ಮಾಡಲಾಯಿತು. ಓ ಹೇ ಕೇ ಸರಿಯಿದೆ.

ಪ್ರಧಾನ ವ್ಯವಹಾರ ನ್ಯಾಯಾಧೀಶರು,

ತೀರ್ಥಹಳ್ಳಿ